# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 723(772)

ಸದಸ್ಯರ ಹೆಸರು : ಶ್ರೀ ವೈ.ಎಂ. ಸತೀಶ್
(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 10.03.2026

ಉತ್ತರಿಸುವವರು : ಪೌರಾಡಳಿತ ಮತ್ತು ಹಜ್ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ನಗರ ಸಭೆ ವ್ಯಾಪ್ತಿಯ ಸಾರ್ವಜನಿಕ ಸ್ಥಳಗಳಾದ ರಸ್ತೆ, ವೃತ್ತಗಳಲ್ಲಿ ಪ್ರತಿಮೆ ಮತ್ತಳಿಗಳನ್ನು ಇರಿಸಲು, ಪ್ರತಿಷ್ಠಾಪನೆ ಮಾಡಲು ಇರುವ ನಿಯಮಗಳೇನು: | ಕರ್ನಾಟಕ ಮುನ್ಸಿಪಲ್ ಕಾರ್ಪೊರೇಷನ್ (ಸಾರ್ವಜನಿಕ ಸ್ಥಳಕ್ಕೆ ನಾಮಕರಣ ಮಾಡುವುದು) ನಿಯಮಗಳು 2008 ಮತ್ತು ನಗರಸಭೆ / ಪುರಸಭೆ / ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಗಣ್ಯ ವ್ಯಕ್ತಿಗಳ ಪ್ರತಿಮೆ ಸ್ಥಾಪನೆ ಹಾಗೂ ಬೀದಿ ರಸ್ತೆ, ಅಡ್ಡ ರಸ್ತೆ, ವೃತ್ತ ಮತ್ತು ಬಡಾವಣೆಗಳಿಗೆ ಹೆಸರುಗಳನ್ನಿಡುವ ಬಗ್ಗೆ ಅಥವಾ ಮರು ನಾಮಕರಣ ಮಾಡುವ ಬಗ್ಗೆ ಪೌರಾಡಳಿತ ನಿರ್ದೇಶನಾಲಯದ ಸುತ್ತೋಲೆ ದಿನಾಂಕ: 17.12.2012ರ ಮಾರ್ಗಸೂಚಿಗಳಂತೆ ಅನುಸರಿಸಲಾಗುತ್ತಿದೆ. ಸುತ್ತೋಲೆ ಪ್ರತಿಯನ್ನು **ಅನುಬಂಧ-1ರಲ್ಲಿ** ನೀಡಲಾಗಿದೆ. |
| ಆ) | ಬಳ್ಳಾರಿ ನಗರದ ವಾಲ್ಮೀಕಿ (ಎಸ್‌ಪಿ) ವೃತ್ತದಲ್ಲಿ ವಾಲ್ಮೀಕಿ ಪುತ್ಥಳಿಯನ್ನು ಪ್ರತಿಷ್ಠಾಪನೆ ಮಾಡಲು ಅನುಮತಿ ಪಡೆಯಲಾಗಿದೆಯೇ: ಪಡೆದಿದ್ದಲ್ಲಿ, ಅವುಗಳ ಆದೇಶ ಪ್ರತಿಗಳೊಂದಿಗೆ ಮಾಹಿತಿ ಒದಗಿಸುವುದು; | ಬಳ್ಳಾರಿ ಮಹಾನಗರಪಾಲಿಕೆಯ ವಾರ್ಡ್ ನಂ: 37ರ ಎಸ್.ಪಿ ವೃತ್ತಕ್ಕೆ ಶ್ರೀ ಮಹರ್ಷಿ ವಾಲ್ಮೀಕಿ ವೃತ್ತ ಎಂದು ನಾಮಕರಣ ಮಾಡಿ ವಾಲ್ಮೀಕಿ ಪುತ್ಥಳಿ ಸ್ಥಾಪನೆ ಮಾಡುವ ಕುರಿತು ಮಾನ್ಯ ಜಿಲ್ಲಾಧಿಕಾರಿಗಳ ಮೂಲಕ ಸ್ವೀಕೃತವಾದ ಪ್ರಸ್ತಾವನೆಗೆ ಅನುಮೋದನೆ ನೀಡುವಂತೆ ಪೌರಾಡಳಿತ ನಿರ್ದೇಶನಾಲಯದಿಂದ ದಿನಾಂಕ: 31.12.2025ರಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಪರಿಶೀಲನೆಯಲ್ಲಿರುತ್ತದೆ. |
| ಇ) | ಅನುಮತಿ ಪಡೆಯಲು ಸಂಬಂಧಿಸಿದ ಇಲಾಖೆಗಳು ಈವರೆಗೆ ನಡೆಸಿರುವ ಪ್ರಯತ್ನಗಳೇನು: (ವಿವರಗಳೊಂದಿಗೆ ಮಾಹಿತಿ ಒದಗಿಸುವುದು) | • ದಿನಾಂಕ: 20.01.2003 ರಂದು ಜರುಗಿದ ಅಂದಿನ ಬಳ್ಳಾರಿ ನಗರಸಭೆಯ ಠರಾವು ಸಂ: 334 ರಲ್ಲಿ ಬಳ್ಳಾರಿ ನಗರದ ಎಸ್.ಪಿ.ವೃತ್ತದಲ್ಲಿ ವಾಲ್ಮೀಕಿ ಪುತ್ಥಳಿ ಸ್ಥಾಪಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿರುತ್ತದೆ.<br><br>• ಸಾಮಾನ್ಯ ಸಭೆಯ ಠರಾವು ಸಂಖ್ಯೆ: 334ರ ಮಂಜೂರಾತಿ ಮೇರೆಗೆ ದಿನಾಂಕ: 29.11.2025 ರಂದು ವಿಜಯನಗರ ವಾಣಿ ಮತ್ತು ವಿಜಯ ಕರ್ನಾಟಕ ಸ್ಥಳೀಯ ದಿನಪತ್ರಿಕೆಯಲ್ಲಿ ಪ್ರಚುರಪಡಿಸಿ ಸಾರ್ವಜನಿಕರು ಸಲಹೆ, ಆಕ್ಷೇಪಣೆಗಳನ್ನು ಸಲ್ಲಿಸಲು 30 ದಿನಗಳ ಕಾಲಾವಕಾಶ ನೀಡಲಾಗಿರುತ್ತದೆ. ಪಾಲಿಕೆಗೆ ನಿಗಧಿತ ಅವಧಿಯಲ್ಲಿ ಸಾರ್ವಜನಿಕರಿಂದ ಯಾವುದೇ ಆಕ್ಷೇಪಣೆಗಳು ಸ್ವೀಕೃತವಾಗಿರುವುದಿಲ್ಲ. |

| | | |
|---|---|---|
| | | • ಪೋಲಿಸ್ ಅಧೀಕ್ಷಕರು, ಬಳ್ಳಾರಿ ರವರು ಸದರಿ ಸ್ಥಳದಲ್ಲಿ ವಾಸ ಮಾಡುವ ನಿವಾಸಿಗಳ ಹಾಗೂ ಸಾರ್ವಜನಿಕರ ಯಾವುದೇ ಆಕ್ಷೇಪಣೆ ಇರುವುದಿಲ್ಲವೆಂದು ಮತ್ತು ಶ್ರೀ ಮಹರ್ಷಿ ವಾಲ್ಮೀಕಿ ಪುತ್ಥಳಿ ಸ್ಥಾಪನೆ ಮಾಡಲು ಮತ್ತು ವೃತ್ತಕ್ಕೆ ವಾಲ್ಮೀಕಿ ವೃತ್ತ ಎಂದು ನಾಮಕರಣ ಮಾಡಲು ಸಾರ್ವಜನಿಕರ ಒಕ್ಕೊರೋಲಿನ ಅಭಿಪ್ರಾಯವಾಗಿರುತ್ತದೆ ಎಂಬ ವರದಿಯನ್ನು ಸಲ್ಲಿಸಿರುತ್ತಾರೆ.<br>• ಜಿಲ್ಲಾಧ್ಯಕ್ಷರು, ಬಳ್ಳಾರಿ ಜಿಲ್ಲಾ ವಾಲ್ಮೀಕಿ ನಾಯಕರ ವಿದ್ಯಾಭಿವೃದ್ಧಿ ಸಂಘ, ಬಳ್ಳಾರಿ ರವರು ವಾಲ್ಮೀಕಿ ಪುತ್ಥಳಿ ಕುರಿತು ಭದ್ರತೆ, ಸಂರಕ್ಷಣೆ ಮತ್ತು ನಿರ್ವಹಣೆ ಮಾಡಲಾಗುವುದು ಎಂದು ಅಫಿಡವಿಟ್ ಮೂಲಕ ಮುಚ್ಚಳಿಕೆ ಪತ್ರ ನೀಡಿರುತ್ತಾರೆ. |
| ಈ) | ಅನುಮತಿಯೇ ಇಲ್ಲದೇ ಪುತ್ಥಳಿ ಪ್ರತಿಷ್ಠಾಪನೆ ಮಾಡಿದ್ದರೆ, ಅದು ಕಾನೂನು ಬಾಹಿರ ಅಲ್ಲವೇ ಹಾಗಿದ್ದಲ್ಲಿ ಅದರ ವಿರುದ್ಧ ಸರ್ಕಾರ ತೆಗೆದುಕೊಂಡ ಕಾನೂನು ಕ್ರಮಗಳೇನು: | ಸದರಿ ಪುತ್ಥಳಿ ಪ್ರತಿಷ್ಠಾಪನೆಗೆ ಸರ್ಕಾರದ ಪರಿಶೀಲನೆಯಲ್ಲಿದ್ದು, ಸರ್ಕಾರದಿಂದ ಅನುಮೋದನೆಯಾದ ನಂತರ ಮೂರ್ತಿ ಸ್ಥಾಪನೆಗೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದರಿಂದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ. |
| ಉ) | ಇದಕ್ಕೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕ್ರಮಗಳನ್ನು ಯಾವಾಗ ಕೈಗೊಳ್ಳಲಾಗುತ್ತದೆ? (ವಿವರಗಳನ್ನು ಒದಗಿಸುವುದು) | |

**ಇ-ಸಂಖ್ಯೆ: ನಅಇ 81 ಜಿಇಎಲ್ 2026 (ಇ)**

**(ರಹೀಂ ಖಾನ್)**
ಪೌರಾಡಳಿತ ಮತ್ತು ಹಜ್ ಸಚಿವರು.

ಆಯುಕ್ತರ ಕಛೇರಿ
ಪೌರಾಡಳಿತ ನಿರ್ದೇಶನಾಲಯ

ಕರ್ನಾಟಕ ಸರ್ಕಾರ

ದೂರವಾಣಿ:080- 22867172 / 22866302
ಫ್ಯಾಕ್ಸ್: 080-22863576 / 22861665
Email: dmablr@yahoo.co.in
9ನೇ ಮಹಡಿ, ವಿಶ್ವೇಶ್ವರಯ್ಯ ಗೋಪುರ,
ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು 560001.

ಸಂಖ್ಯೆ:ಪೌನಿ/ಜಿಪಿಎಸ್/ಪ್ರತಿಮೆ/ನಾಮ/ಸಿಆರ್/ /2012-13. ದಿನಾಂಕ: 17/12/2012

:: ಸುತ್ತೋಲೆ ::

ವಿಷಯ: ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಗಣ್ಯ ವ್ಯಕ್ತಿಗಳ ಪ್ರತಿಮ ಸ್ಥಾಪನೆ, ಹಾಗೂ ಬೀದಿ ರಸ್ತೆ ಅಡ್ಡ ರಸ್ತೆ, ವೃತ್ತ ಮತ್ತು ಬಡಾವಣೆಗಳಿಗೆ ಹೆಸರುಗಳನ್ನಿಡುವ ಬಗ್ಗೆ ಅಥವಾ ಮರು ನಾಮಕರಣ ಮಾಡುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಸುತ್ತೋಲೆ ಸಂ.ನಅಇ 57 ಟಿಎಂಎ 93(ಭಾಗ) ದಿನಾಂಕ.4.2.1995.
2. ಸರ್ಕಾರದ ಸುತ್ತೋಲೆ ಸಂ.ಕಸಂಮಸ್ಥ/564/ಕಸಧ/2012. ದಿನಾಂಕ.11.6.2012.

***

ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿಗಳ ವ್ಯಾಪ್ತಿಯಲ್ಲಿರುವ ಚರಿತ್ರಾರ್ಹ ವ್ಯಕ್ತಿಗಳ ಪ್ರತಿಮೆ ಸ್ಥಾಪಿಸಲು ಹಾಗೂ ಕೆಲವು ರಸ್ತೆಗಳಿಗೆ ಹೆಸರಾಂತ ಸಂತರು, ಶರಣರು, ಸ್ವಾತಂತ್ರ್ಯ ಹೋರಾಟಗಾರರು, ಗಣ್ಯ ವ್ಯಕ್ತಿಗಳು ಮುಂತಾದವರು ದೇಶಕ್ಕಾಗಿ ಸಲ್ಲಿಸಿದ ಸೇವೆ ತ್ಯಾಗ ಮನೋಭಾವಗಳನ್ನು ಸ್ಮರಿಸುವ ಉದ್ದೇಶದಿಂದ ಕರ್ನಾಟಕ ಪುರಸಭೆಗಳ 1964ರ ಕಾಯ್ದೆ 211(1)ರ ಪ್ರಕಾರ ಪ್ರಸ್ತಾವನೆಯನ್ನು ಪೌರಾಯುಕ್ತರು/ ಮುಖ್ಯಾಧಿಕಾರಿಗಳು ಆಯಾ ಜಿಲ್ಲಾಧಿಕಾರಿಗಳ ಮುಖಾಂತರ ಕಳುಹಿಸಲಾಗುತ್ತಿದೆ. ಈಗಾಗಲೇ ಉಲ್ಲೇಖ (1) ಮತ್ತು (2)ರಲ್ಲಿ ಸರ್ಕಾರ ಹೊರಡಿಸಿರುವ ಸುತ್ತೋಲೆಯಲ್ಲಿ ತಿಳಿಸಿರುವಂತೆ ಪ್ರಸ್ತಾವನೆ ಸಲ್ಲಿಸದೇ ಇರುವುದು ಕಂಡುಬರುತ್ತದೆ. ಇದರಿಂದ ಇಂತಹ ಪ್ರತಿಮೆಗಳನ್ನು ಸಮರ್ಪಕವಾಗಿ ನಿರ್ವಹಿಸದೇ ಇದ್ದು ವಿರೂಪಗೊಂಡಿರುವುದು ಹಾಗೂ ಇನ್ನಿತರ ಅಹಿತಕರ ಘಟನೆಗಳು ಸಂಭವಿಸುವುದರಿಂದ ಅಶಾಂತತೆಗೆ ಭಂಗ ಉಂಟಾಗುತ್ತಿರುವುದು ತಿಳಿದುಬರುತ್ತದೆ. ಈ ಬಗ್ಗೆ ಪ್ರತಿಮೆಗಳ ಸ್ಥಾಪನೆಗೆ ಸ್ಪಷ್ಟವಾದ ಮಾರ್ಗಸೂಚಿಗಳಿಲ್ಲದಿರುವುದನ್ನು ಮನಗಂಡು ಯಾವುದೆ ಸರ್ಕಾರಿ ಜಾಗದಲ್ಲಿ ಗಣ್ಯ ವ್ಯಕ್ತಿಗಳ ಪ್ರತಿಮೆಗಳನ್ನು ಸ್ಥಾಪನೆ ಮಾಡುವುದು ಸೂಕ್ತವಲ್ಲವೆಂದು ಪರಿಗಣಿಸಿ ಗಣ್ಯ ವ್ಯಕ್ತಿಗಳ ಪ್ರತಿಮೆಗಳ ಸ್ಥಾಪನೆಗೆ ಸಂಬಂಧಿಸಿದಂತೆ ಹಾಗೂ ಬೀದಿ ರಸ್ತೆ, ವೃತ್ತ ಮುಂತಾದವುಗಳಿಗೆ ಸರ್ಕಾರವು ಈ ಕೆಳಗಿನ ಮಾರ್ಗಸೂಚಿಗಳನ್ನು ಹೊರಡಿಸಿದೆ.

1. ಸರ್ಕಾರದ/ಸಾರ್ವಜನಿಕ, ಜಾಗದಲ್ಲಿ ಯಾವುದೇ ಸಂತರ/ಶರಣರ, ಜನ ನಾಯಕರ, ಸ್ವಾತಂತ್ರ್ಯ ಹೋರಾಟಗಾರರ ಅಥವಾ ಗಣ್ಯ ವ್ಯಕ್ತಿಗಳ ಪ್ರತಿಮೆಗಳನ್ನು ಸ್ಥಾಪಿಸುವುದನ್ನು ನಿರ್ಬಂಧಿಸಿದೆ.
2. ಪ್ರತಿಮೆ ಸ್ಥಾಪಿಸುವುದಕ್ಕೆ ಸಂಘ ಸಂಸ್ಥೆಗಳು ಮುಂದೆ ಬಂದಲ್ಲಿ ಪ್ರಾಥಮಿಕವಾಗಿ ಅಂತಹ ಸಂಘ ಸಂಸ್ಥೆಗಳು ತಮಗೆ ಸೇರಿದ ನಿವೇಶನದಲ್ಲಿ ಪ್ರತಿಮೆಯನ್ನು ನಿರ್ಮಿಸುವ ಹಾಗೂ ಅವುಗಳ ಭದ್ರತೆ ಮತ್ತು ಸಂರಕ್ಷಣೆಗೆ ಸಂಬಂಧಿಸಿದಂತೆ ಮುಚ್ಚಳಿಕೆ ನೀಡತಕ್ಕದ್ದು.
3. ಮಂಜೂರಾತಿ ಪಡೆದು ಸ್ಥಾಪಿಸಲಾದ ಪ್ರತಿಮೆಗಳ ನಿರ್ವಹಣೆಯನ್ನು ಆಯಾ ಸಂಘ ಸಂಸ್ಥೆಗಳೇ ನಿರ್ವಹಿಸತಕ್ಕದ್ದು.
4. ನಗರ ಸ್ಥಳೀಯ ಸಂಸ್ಥೆಗಳು ತಮ್ಮ ಕೌನ್ಸಿಲ್ ಅಧಿವೇಶನದಲ್ಲಿ ಠರಾವು ಮಾಡಿದ ಪ್ರಸ್ತಾವನೆಯನ್ನು ಸಾರ್ವಜನಿಕರ ಗಮನಕ್ಕೆ ಸ್ಥಳೀಯ ಪತ್ರಿಕೆಗಳ ಮುಖಾಂತರ ಪ್ರಚುರ ಪಡಿಸುವುದು.

Scanned with OKEN Scanner

5. ಈ ಬಗ್ಗೆ ನಗರ ಸ್ಥಳೀಯ ಸಂಸ್ಥೆಯು ತಹಶೀಲ್ದಾರ್, ಜಿಲ್ಲಾಧಿಕಾರಿಗಳ ಕಛೇರಿಯ ನೋಟಿಸ್ ಬೋರ್ಡ್‌ನಲ್ಲಿ ಸಾರ್ವಜನಿಕ ಗಮನಕ್ಕೆ ಬರುವಂತೆ ಪ್ರಕಟಣೆ ಪಡಿಸುವುದು.
6. ಅನಂತರ ಪ್ರಚುರ ಪಡಿಸಿದ ಬಗ್ಗೆ ಪಂಚನಾಮೆ ಮಾಡಿಸಿ ಈ ಬಗ್ಗೆ ಸಾರ್ವಜನಿಕರಿಂದ ಸಲಹೆ ಹಾಗೂ ಆಕ್ಷೇಪಣೆಗಳಿಗೆ 30 ದಿನಗಳ ಕಾಲಾವಕಾಶ ಕೊಡುವುದು.
7. ಹಾಗೂ ಸಾರ್ವಜನಿಕರಿಂದ ಬಂದ ಸಲಹೆ ಮತ್ತು ಆಕ್ಷೇಪಣೆಗಳನ್ನು ಸಂಬಂಧಿಸಿದ ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿಯು ಗಮನಕ್ಕೆ ತಂದು ಪುನ: ಠರಾವು ಪಾಸು ಮಾಡಿಸುವುದು.
8. ಹೀಗೆ ಠರಾವು ಮಾಡಿದ ವಿಷಯದ ಬಗ್ಗೆ ರಸ್ತೆಗೆ ಹೆಸರು ಇಟ್ಟರೆ ಅಥವಾ ಯಾವುದಾದರೂ ಪ್ರತಿಮೆ ಸ್ಥಾಪಿಸಿದರೆ ಅದರಿಂದ ಯಾವ ರೀತಿಯ ಗಲಭೆ ಆಗುವ ಸಾಧ್ಯತೆ ಇಲ್ಲ ಎಂದು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಂದ ವರದಿ ಪಡೆದು ಪ್ರಸ್ತಾವನೆ ಸಲ್ಲಿಸುವುದು.
9. ಇದ್ದ ಹೆಸರುಗಳನ್ನು ಬದಲಿಸಿ ಹೊಸ ಹೆಸರನ್ನು ನಾಮಕರಣ ಮಾಡಲು ಹಾಗೂ ಹೆಚ್ಚುವರಿ ಹೆಸರು ನಾಮಕರಣ ಮಾಡುವ ಪ್ರಸ್ತಾವನೆಯನ್ನು ಸರ್ಕಾರದ ಪೂರ್ವಾನುಮತಿಯಿಲ್ಲದೇ ಬದಲಾಯಿಸತಕ್ಕದ್ದಲ್ಲ.

ಆದ್ದರಿಂದ ಇನ್ನು ಮುಂದೆ ಪೌರಾಯುಕ್ತರು/ಮುಖ್ಯಾಧಿಕಾರಿಗಳು ಪ್ರಸ್ತಾವನೆಯನ್ನು ಸಲ್ಲಿಸುವ ಮುನ್ನ ಈ ಮೇಲ್ಕಂಡ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಕಳುಹಿಸಿದ ಪ್ರಸ್ತಾವನೆಗಳಿಗೆ ಮಾತ್ರ ಗಮನ ಕೊಡಲಾಗುವುದು. ಈ ಬಗ್ಗೆ ಯಾವುದೆ ಕಾರಣಕ್ಕೂ ಈ ಮೇಲಿನಂತೆ ತಿಳಿಸಿರುವ ಸೂಚನೆಗಳನ್ನು ಗಮನಿಸದೇ ಪ್ರಸ್ತಾವನೆಗಳನ್ನು ಕಳುಹಿಸುವ ಅಧಿಕಾರಿಗಳ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು. ಹಾಗೂ ಸದರಿ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳ ಸ್ಪಷ್ಟವಾದ ಅಭಿಪ್ರಾಯದೊಂದಿಗೆ ಸಲ್ಲಿಸುವುದು.

ಆಯುಕ್ತರು,
ಪೌರಾಡಳಿತ ನಿರ್ದೇಶನಾಲಯ,
ಬೆಂಗಳೂರು.

ಪ್ರತಿಗಳನ್ನು:
1. ರಾಜ್ಯದ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
2. ರಾಜ್ಯದ ಎಲ್ಲಾ ಜಿಲ್ಲೆಯ ನಗರಾಭಿವೃದ್ಧಿಕೋಶದ ಯೋಜನಾ ನಿರ್ದೇಶಕರು.
3. ರಾಜ್ಯದ ಎಲ್ಲಾ ಜಿಲ್ಲೆಯ ನಗರಸಭೆ/ಪುಸಭೆ/ಪಟ್ಟಣ ಪಂಚಾಯಿತಿಯ ಪೌರಾಯುಕ್ತರು/ಮುಖ್ಯಾಧಿಕಾರಿಗಳಿಗೆ.
4. ಕಛೇರಿ ಪ್ರತಿ.

Scanned with OKEN Scanner